## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 426 |
| 2 | ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ (ಪದವೀಧರರಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 07-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಿ.ಬಿ.ಎಂ.ಪಿ ವ್ಯಾಪ್ತಿಗೆ ಬರುವ ಶಾಲಾ ಕಾಲೇಜುಗಳಲ್ಲಿ ಹಲವಾರು ಶಿಕ್ಷಕರು ಹೊರಗುತ್ತಿಗೆಯ ಮೇಲೆ ಕನಿಷ್ಠ ವೇತನದಡಿ ಕರ್ತವ್ಯ ನಿರ್ವಹಿಸುತ್ತಿರುವುದು ಹಾಗೂ ಮೂರು ತಿಂಗಳಿಗೊಮ್ಮೆ ವೇತನವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಇಲ್ಲ.<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅರ್ಹ ಮಾನವ ಸಂಪನ್ಮೂಲ ಸರಬರಾಜು ಮಾಡುವ ಸಂಸ್ಥೆಗಳಿಂದ ಸಾರ್ವಜನಿಕ ಟೆಂಡರ್ ಅನ್ನು ಆಹ್ವಾನಿಸುವುದರ ಮೂಲಕ ಹೊರಗುತ್ತಿಗೆ ಆಧಾರದ ಮೇಲೆ ಶಿಕ್ಷಕರು / ಉಪನ್ಯಾಸಕರುಗಳನ್ನು 11 ತಿಂಗಳ ಅವಧಿಗೆ ನೇಮಕ ಮಾಡಿಕೊಂಡು ಪ್ರತಿ ತಿಂಗಳು ಗೌರವಧನವನ್ನು ನೀಡಲಾಗುತ್ತಿದೆ. |
| ಆ) | ಇವರಲ್ಲಿ ಅನೇಕ ಶಿಕ್ಷಕರು ಸ್ನಾತಕೋತ್ತರ ಎನ್.ಇ.ಟಿ ಮತ್ತು ಪಿ.ಹೆಚ್.ಡಿ ಪದವಿಗಳನ್ನು ಹೊಂದಿದ್ದು, ಇವರಲ್ಲಿ ಅನೇಕರು ಸರ್ಕಾರಿ ನೌಕರಿ ಪಡೆಯಲು ವಯೋಮಿತಿ ಮೀರಿರುವುದರಿಂದ ಕನಿಷ್ಠ ವೇತನದಲ್ಲಿ ಜೀವನ ನಡೆಸುತ್ತಿದ್ದು, ಇವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಚಿಂತನೆ ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಸಮಾನ ವೇತನ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? | ಪಾಲಿಕೆಯ ಕೌನ್ಸಿಲ್ ಸಭೆಯಲ್ಲಿ ತೀರ್ಮಾನ ಕೈಗೊಂಡು ಶಿಕ್ಷಕರು ಮತ್ತು ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಬಗ್ಗೆ ಪಾಲಿಕೆಯು ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಯು ಸರ್ಕಾರದ ನಿಯಮಗಳಿಗೆ ವಿರುದ್ಧವಾಗಿದ್ದರಿಂದ ಈ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ. |

**ಸಂಖ್ಯೆ: ನಅಇ 436 ಎಂಎನ್‌ಯು 2023**

**(ಡಿ.ಕೆ.ಶಿವಕುಮಾರ್)**
ಉಪ ಮುಖ್ಯಮಂತ್ರಿ